ಗದಗ ಜಿಲ್ಲೆ ಮುಂಡರಗಿ ಕ್ಷೇತ್ರದಲ್ಲಿ ಪಶುಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೇರಿಸುವುದು

37 (304) ಶ್ರೀ ಪಾಟೀಲ್ ಸಿದ್ದಲಿಂಗನಗೌಡ ಸಿದ್ದನಗೌಡ (ಮುಂಡರಗಿ) ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಗದಗ ಜಿಲ್ಲೆ ಮುಂಡರಗಿ ಮತದಾರ ಕ್ಷೇತ್ರದಲ್ಲಿ ಪಶುಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೇರಿಸಿದ ವಿವರ ನೀಡುವುದು

ಆ) ಹೊಸದಾಗಿ ಪಶುಚಿಕಿತ್ಸಾಲಯಗಳನ್ನು ಮಂಜೂರು ಮಾಡಲಾಗುವುದೆ

ಇ) ಮುಂಡರಗಿ ಪಶು ಆಸ್ಪತ್ರೆಯು ಕಟ್ಟಡ ಅರ್ಧಕ್ಕೆ ನಿಂತಿದ್ದು ಅದನ್ನು ಪೂರ್ಣಗೊಳಿಸಲಾಗುವುದೆ?

ಶ್ರೀ ಎಂ ಮಹಾದೇವ್ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು)

ಅ) ಪಶುಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೇರಿಸುವ ಕಾರ್ಯಕ್ರಮ ಇರುವುದಿಲ್ಲ

ಆ) ಸಧ್ಯಕ್ಕೆ ಹೊಸ ಪಶುಚಿಕಿತ್ಸಾಲಯಗಳನ್ನು ಮಂಜೂರು ಮಾಡುವ ಕಾರ್ಯಕ್ರಮ ಇರುವುದಿಲ್ಲ

ಇ) ಸದರೀ ಕಟ್ಟಡವು ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಬರುತ್ತಿದ್ದು, ಅದನ್ನು ತೀವ್ರವಾಗಿ ಪೂರ್ಣಗೊಳಿಸಲು ಗದಗ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಿಗೆ ಪತ್ರ ಬರೆಯಲಾಗಿದೆ

ಭಟ್ಕಳ ವಿಧಾನ ಸಭಾ ಕ್ಷೇತ್ರವ್ಯಾಪ್ತಿಯ ಮೀನುಗಾರಿಕಾ ಬಂದರಿನ ಹೂಳು ತೆಗೆಯುವುದು

38 (87) ಶ್ರೀ ನಾಯಕ್ ಜೆ ಡಿ (ಭಟ್ಕಳ) ಮಾನ್ಯ ಮೀನುಗಾರಿಕೆ ಹಾಗೂ ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಭಟ್ಕಳ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಭಟ್ಕಳ ತೆಂಗಿನಗುಂಡಿ ಹಾಗೂ ಹೊನ್ನಾವರ ತಾಲ್ಲೂಕಿನ ಕಾಸರಗೋಡು ಮೀನುಗಾರಿಕಾ ಬಂದರುಗಳಲ್ಲಿ ಹೂಳು ತುಂಬಿ ಮೀನುಗಾರಿಕೆ ಮಾಡಲು ತೊಂದರೆಯಾಗಿ ಸಾಕಷ್ಟು ಬೋಟುಗಳಿಗೆ ನಷ್ಟ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಆ) ಗಮನಕ್ಕೆ ಬಂದಿದ್ದಲ್ಲಿ ಯಾವಾಗ ಹೂಳು ತೆಗೆಯುವ ಕಾರ್ಯ ಪ್ರಾರಂಭಿಸಲಾಗುವುದು?

ಶ್ರೀ ವಸಂತ ಏ ಸಾಲಿಯಾನ (ಮೀನುಗಾರಿಕೆ ಹಾಗೂ ಬಂದರು ರಾಜ್ಯ ಸಚಿವರು)

ಅ) ಭಟ್ಕಳ ತೆಂಗಿನಗುಂಡಿ, ಹಾಗೂ ಹೊನ್ನಾವರ ಮೀನುಗಾರಿಕಾ ಬಂದರಿನಲ್ಲಿ ಹೂಳು ತುಂಬಿ ಮೀನುಗಾರಿಕೆಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ

ಆ) ಭಟ್ಕಳ

ಭಟ್ಕಳ ಬಂದರಿನಲ್ಲಿ 1996ರಲ್ಲಿ ಹೂಳು ತೆಗೆದಿದ್ದು 1998 ರಿಂದ ಪುನ ಹೂಳು ತುಂಬಿರುತ್ತದೆ ಈ ತೊಂದರೆಯನ್ನು ದೀರ್ಘಾವಧಿಗೆ ಬಗೆಹರಿಸಲು ವೈಜ್ಞಾನಿಕ ಪರಿಹಾರ ಅಗತ್ಯವಿದೆ ಈ ಸಂಬಂಧ ಅಧ್ಯಯನ ಪಶೀಲನೆ ಹಾಗೂ ತಜ್ಞರ ಅಭಿಪ್ರಾಯ ಪಡೆಯುವ ಸಲುವಾಗಿ ಬಂದರು ಇಲಾಖೆಯವರು ಸೆಂಟ್ರಲ್ ವಾಟರ್ ಮತ್ತು ಪವರ್ ರಿಸರ್ಚ್ ಸ್ಟೇಷನ್, ಪುಣೆ ಇವರೊಂದಿಗೆ ವ್ಯವಹರಿಸಿರುತ್ತಾರೆ ಅಗತ್ಯವಾದ ಅಧ್ಯಯನ, ಹಾಗೂ ಮಾಹಿತಿ ಸಂಗ್ರಹಣೆಗೆ ಕ್ರಮ ಕೈಗೊಳ್ಳಲಾಗುತ್ತಿದ

ಮೀನುಗಾರರ ಜೀವದ ರಕ್ಷಣೆಯ ದೃಷ್ಟಿಯಿಂದ ತಾತ್ಕಾಲಿಕ ಪರಿಹಾರವಾಗಿ ಶೀಘ್ರದೇ ಹೊಳೆತ್ತುವ ಸಲುವಾಗಿ ಬಂದರು ಇಲಾಖೆಯವರು ರೂ 265 00 ಲಕ್ಷಗಳ ರೇಖಾ ಅಂದಾಜು ಪಟ್ಟಿಯನ್ನು ತಯಾರಿಸಿ ಸಲ್ಲಿಸಿದ್ದು, 'ಅಸೈಡ್ ಯೋಜನೆಯಡಿ' ಧನ ಸಹಾಯ ಪಡೆಯಲು ಪ್ರಯತ್ನಿಸಲಾಗುತ್ತಿದೆ

ತೆಂಗಿನಗುಂಡಿ

ಅಳವೆ ಕೋಡಿಯಲ್ಲಿ ಕೇಂದ್ರ ಪುರಸ್ಕೃತ ಯೋಜನೆಯಡಿ ಮೀನುಗಾರಿಕೆ ಇಳಿದಾಣ ಕೇಂದ್ರ ನಿರ್ಮಾಣ ಮಾಡಲು ಭಾರತ ಸರ್ಕಾರದ ಅನುಮೋದನೆಗಾಗಿ 2002–03 ಸಾಲಿನ ಎಸ್ ಆರ್ ದರದ ಪ್ರಕಾರ ರೂ 225 00 ಲಕ್ಷಗಳ ಅಂದಾಜು ಪಟ್ಟಿಯನ್ನು ಸಲ್ಲಿಸಲಾಗಿದೆ ಈ ಯೋಜನೆಯಲ್ಲಿ ಹೂಳೆತ್ತುವ ಕಾಮಗಾರಿ ಹಾಗೂ ಇತರೇ ಅಭಿವೃದ್ಧಿ ಕಾಮಗಾರಿಗಳು ಸೇರಿರುತ್ತವೆ ಕೇಂದ್ರ ಸರ್ಕಾರವು ಪರಿಷ್ಕೃತ ಪ್ರಸ್ತಾವನೆಯನ್ನು ಸಲ್ಲಿಸಲು ಕೋರಿರುತ್ತದೆ ಪರಿಷ್ಕೃತ ಪ್ರಸ್ತಾವನೆ ಸಿದ್ದಪಡಿಸಿ, ಸಲ್ಲಿಸಿ ಭಾರತ ಸರ್ಕಾರದ ಅನುಮೋದನೆ ದೊರೆತ ನಂತರ ಮುಂದಿನ ಕ್ರಮವನ್ನು ಕೈಗೊಳ್ಳಲಾಗುವುದು

ಹೊನ್ನಾವರ

ಹೊನ್ನಾವರ 2ನೇ ಹಂತದ ಮೀನುಗಾರಿಕೆ ಬಂದರು ನಿರ್ಮಿಸುವ ಸಂಬಂಧ ಕೇಂದ್ರ ಸರ್ಕಾರವು ರಚಿಸಿದ್ದ ಅಧ್ಯಯನ ತಂಡವು ಸ್ಥಳ ಪರಿಶೀಲನೆ ಮಾಡಿ ವರದಿ ನೀಡಿರುತ್ತದೆ ವರದಿಯ ಆಧಾರದ ಮೇಲೆ ಸಮಗ್ರ ಪ್ರಸ್ತಾವನೆ ಸಿದ್ದಪಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಇದರಲ್ಲಿ ಹೂಳೆತ್ತುವ ಕಾಮಗಾರಿಯು ಸೇರಿರುತ್ತದೆ

ಮೀನುಗಾರರ ಜೀವದ ರಕ್ಷಣೆಯ ದೃಷ್ಟಿಯಿಂದ ತಾತ್ಕಾಲಿಕ ಪರಿಹಾರವಾಗಿ ಹೂಳೆತ್ತುವ ಕಾಮಗಾರಿಯನ್ನು ಕೈಗೊಳ್ಳಲು ರೂ 300 00 ಲಕ್ಷಗಳ ರೇಖಾ ಅಂದಾಜು ಪಟ್ಟಿಯನ್ನು ಬಂದರು ಇಲಾಖೆಯವರು ತಯಾರಿಸಿರುತ್ತಾರೆ ಈ ಪ್ರಸ್ತಾವನೆಗೆ 'ಅಸೈಡ್' ಯೋಜನೆಯಲ್ಲಿ ಧನ ಸಹಾಯ ಪಡೆಯಲು ಕ್ರಮ ಕೈಗೊಳ್ಳಲಾಗುತ್ತಿದೆ

ನಾಗಮಂಗಲ ತಾಲ್ಲೂಕಿನಲ್ಲಿ ರೇಷ್ಮೆ ಅಭಿವೃದ್ಧಿಗೆ ಫಾರಂ ಸ್ಥಾಪನೆ

39 (130) ಶ್ರೀ ಎನ್ ಚೆಲುವನಾರಾಯಣಸ್ವಾಮಿ (ನಾಗಮಂಗಲ) ಮಾನ್ಯ ರೇಷ್ಮೆ, ಜವಳಿ ಹಾಗೂ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಮತ್ತು ನಾಗರಿಕ ವಿಮಾನಯಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ನಾಗಮಂಗಲ ತಾಲ್ಲೂಕಿನಲ್ಲಿ ರೇಷ್ಮೆತಳಿ ಅಭಿವೃದ್ಧಿಪಡಿಸಲು ಫಾರಂ ಸ್ಥಾಪನೆಗೆ ಇಲಾಖೆಯ ಕ್ರಮವೇನು

ಆ) ಈ ಫಾರಂನ್ನು ಬೇರೆ ಕಡೆಗೆ ಸ್ಥಳಾಂತರಿಸಲು ಪ್ರಯತ್ನ ನಡೆಸುತ್ತಿದೆಯೇ

ಇ) ಅಂತಹ ಪ್ರಯತ್ನ ನಡೆಯುತ್ತಿದ್ದರೆ ಈ ಫಾರಂನ್ನು ಬೇರೆ ಕಡೆಗೆ ಸ್ಥಳಾಂತರಿಸದೆ ಇಲ್ಲಿಯೇ ಮುಂದುವರಿಯಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಹೆಚ್ ಎಂ ರೇವಣ್ಣ (ರೇಷ್ಮೆ, ಜವಳಿ ಹಾಗೂ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಮತ್ತು ನಾಗರೀಕ ವಿಮಾನಯಾನ ಸಚಿವರು)

ಅ) ರಾಜ್ಯ ಸರ್ಕಾರವು ಮಂಡ್ಯ ಜಿಲ್ಲೆಯ ನಾಗಮಂಗಲದಲ್ಲಿ ಸ್ಥಾಪಿಸಲಾಗಿದ್ದ ರೇಷ್ಮೆ ಕೃಷಿ ಕ್ಷೇತ್ರವನ್ನು 1980 ರಲ್ಲಿ ರೇಷ್ಮೆ ತಳಿ ಅಭಿವೃದ್ಧಿ ಪಡಿಸಲು ಕೇಂದ್ರ ರೇಷ್ಮೆ ಮಂಡಳಿಗೆ ವರ್ಗಾಯಿಸಿದೆ